ರಾಜ್ಯಕ್ಕೆ ಟಾಪರ್ ಆಗುತ್ತೇನೆಂದು ನಿರೀಕ್ಷೆ ಇರಲಿಲ್ಲ, ಪ್ರಾರಂಭದಿಂದಲೂ ವಿಶೇಷವಾಗಿ ಏನು ಓದುತ್ತಿರಲಿಲ್ಲ, ವಿಜ್ಞಾನ ಹಾಗೂ ಗಣಿತ ವಿಷಯಗಳಲ್ಲಿ ಹೆಚ್ಚಿನ ಗಮನ ಕೇಂದ್ರೀಕರಿಸಿದೆ. ಉತ್ತಮ ಫಲಿತಾಂಶ ಬರಲು ಸಾಧ್ಯವಾಯಿತು. ಈ ಫಲಿತಾಂಶಕ್ಕಾಗಿ ಶಾಲಾ ಮುಖ್ಯ ಶಿಕ್ಷಕರು, ಆಡಳಿತ ವರ್ಗ ಹಾಗೂ ತಂದೆ ತಾಯಿಗೆ ಕೃತಜ್ಞತೆ ಅರ್ಪಿಸುತ್ತೇನೆ.
● **ಸಿ.ಭಾವನಾ,** ಎಸ್ಸೆಸ್ಸೆಲ್ಸಿ ಪರೀಕ್ಷೆ, ರಾಜ್ಯಕ್ಕೆ ಟಾಪರ್

ಬೆಂ.ಗ್ರಾ ಜಿಲ್ಲೆಯ ಇಬ್ಬರು ರಾಜ್ಯಕ್ಕೆ ಟಾಪರ್ಸ್

ಎಸ್ಸೆಸ್ಸೆಲ್ಸಿ ಪರೀಕ್ಷೆಯಲ್ಲಿ ಜಿಲ್ಲೆಗೆ ಶೇ.73.71 ಫಲಿತಾಂಶ | ರಾಜ್ಯಕ್ಕೆ ಒಂಬತ್ತನೇ ಸ್ಥಾನ | ಜಿಲ್ಲಾಧಿಕಾರಿ ಪ್ರಶಂಸೆ

● **ಕನ್ನಡಪ್ರಭ ವಾರ್ತೆ** ದೊಡ್ಡಬಳ್ಳಾಪುರ

2024-25ನೇ ಸಾಲಿನ ಎಸ್ಸೆಸ್ಸೆಲ್ಸಿ ಪರೀಕ್ಷೆಯ ಫಲಿತಾಂಶ ಪ್ರಕಟಗೊಂಡಿದ್ದು ಬೆಂಗಳೂರು ಗ್ರಾಮಾಂತರ ಜಿಲ್ಲೆಯು ಶೇ. 73.71ರಷ್ಟು ಫಲಿತಾಂಶ ಪಡೆಯುವ ಮೂಲಕ ರಾಜ್ಯದಲ್ಲಿ ಒಂಬತ್ತನೆಯ ಸ್ಥಾನ ಪಡೆದುಕೊಂಡಿದೆ.

ಈ ಬಾರಿಯ ಎಸ್ಸೆಸ್ಸೆಲ್ಸಿ ಪರೀಕ್ಷೆಗೆ ಮೊದಲ ಬಾರಿ ಪರೀಕ್ಷೆ ಎದುರಿಸಿದ 13643 ವಿದ್ಯಾರ್ಥಿಗಳ ಪೈಕಿ 10057 ವಿದ್ಯಾರ್ಥಿಗಳು ಉತ್ತೀರ್ಣರಾಗುವ ಮೂಲಕ ಶೇಕಡ 73.71ರಷ್ಟು ಫಲಿತಾಂಶ ದೊರೆತಿದೆ.

ಪರೀಕ್ಷೆಗೆ ಒಟ್ಟು 6803 ಬಾಲಕರು ಹಾಜರಾಗಿದ್ದು, 4576 ಬಾಲಕರು ತೇರ್ಗಡೆಯಾಗುವ ಮೂಲಕ ಶೇ. 67.26 ರಷ್ಟು ಫಲಿತಾಂಶ ಪಡೆದಿದ್ದಾರೆ. 6840 ಬಾಲಕಿಯರು ಪರೀಕ್ಷೆಗೆ ಹಾಜರಾಗಿದ್ದು, 5481 ಬಾಲಕಿಯರು ತೇರ್ಗಡೆ ಹೊಂದುವ ಮೂಲಕ ಶೇ 80.13ರಷ್ಟು ಫಲಿತಾಂಶ ಪಡೆದಿದ್ದಾರೆ.

ನಗರ ಪ್ರದೇಶದ 8576 ವಿದ್ಯಾರ್ಥಿಗಳು ಪರೀಕ್ಷೆಗೆ ಹಾಜರಾಗಿ 6459 ವಿದ್ಯಾರ್ಥಿಗಳು ತೇರ್ಗಡೆಯಾಗುವ ಮೂಲಕ ಶೇ 75.31ರಷ್ಟು ಫಲಿತಾಂಶ ದೊರೆತಿದೆ. ಗ್ರಾಮೀಣ ಪ್ರದೇಶದ 5067 ವಿದ್ಯಾರ್ಥಿಗಳು ಪರೀಕ್ಷೆಗೆ ಹಾಜರಾಗಿ 3598 ವಿದ್ಯಾರ್ಥಿಗಳು ತೇರ್ಗಡೆಯಾಗುವ ಮೂಲಕ ಶೇ.71ರಷ್ಟು ಫಲಿತಾಂಶ ಸಿಕ್ಕಿದೆ.

ತಾಲೂಕುವಾರು ಫಲಿತಾಂಶ: ದೇವನಹಳ್ಳಿ ತಾಲೂಕಿನಲ್ಲಿ 3255 ವಿದ್ಯಾರ್ಥಿಗಳು ಹಾಜರಾಗಿದ್ದು 2550 ವಿದ್ಯಾರ್ಥಿಗಳು ಉತ್ತೀರ್ಣರಾಗಿ ಶೇಕಡಾ 78.34ರಷ್ಟು ಫಲಿತಾಂಶ ಪಡೆದಿದ್ದಾರೆ. ದೊಡ್ಡ ಬಳ್ಳಾಪುರ ತಾಲೂಕಿನಲ್ಲಿ 3654 ವಿದ್ಯಾರ್ಥಿಗಳು ಹಾಜರಾಗಿದ್ದು 2561 ವಿದ್ಯಾರ್ಥಿಗಳು ಉತ್ತೀರ್ಣರಾಗಿ ಶೇ. 70.08 ರಷ್ಟು ಫಲಿತಾಂಶ ಪಡೆದಿದ್ದಾರೆ. ಹೊಸಕೋಟೆ ತಾಲೂಕಿನಲ್ಲಿ 3625 ವಿದ್ಯಾರ್ಥಿಗಳು ಹಾಜರಾಗಿದ್ದು 2646 ವಿದ್ಯಾರ್ಥಿಗಳು ಉತ್ತೀರ್ಣರಾಗಿ ಶೇ.72.99ರಷ್ಟು ಫಲಿತಾಂಶ ಪಡೆದಿದ್ದಾರೆ. ನೆಲಮಂಗಲ ತಾಲೂಕಿನಲ್ಲಿ 3109 ವಿದ್ಯಾರ್ಥಿಗಳು ಹಾಜರಾಗಿದ್ದು 2300 ವಿದ್ಯಾರ್ಥಿಗಳು ಉತ್ತೀರ್ಣರಾಗಿ ಶೇ.73.97ರಷ್ಟು ಫಲಿತಾಂಶ ಪಡೆದು ಜಿಲ್ಲೆಗೆ ಕೀರ್ತಿ ತಂದಿದ್ದಾರೆ.

ಭಾವನಾ, ರಂಜಿತಾ ರಾಜ್ಯಕ್ಕೆ ಟಾಪರ್ಸ್

ರಂಜಿತಾ ಎ.ಸಿ.

ಸಿ.ಭಾವನಾ

ದೊಡ್ಡಬಳ್ಳಾಪುರ ತಾಲೂಕಿನ ಮೆಳೇಕೋಟೆ ಕ್ರಾಸ್‌ನಲ್ಲಿರುವ ಎಸ್‌ಜಿಸಿಆರ್ ಶಾಲೆಯ ರಂಜಿತಾ ಎ.ಸಿ ಹಾಗೂ ದೇವನಹಳ್ಳಿ ತಾಲೂಕಿನ ವಿಜಯಪುರ ಹೋಬಳಿಯ ನೀಲಗಿರೇಶ್ವರ ವಿದ್ಯಾನಿಕೇತನ ಪ್ರೌಢಶಾಲೆಯ ವಿದ್ಯಾರ್ಥಿನಿ ಸಿ.ಭಾವನಾ 625ಕ್ಕೆ 625 ಅಂಕಗಳನ್ನು ಪಡೆದು ರಾಜ್ಯಕ್ಕೆ ಮೊದಲ ಸ್ಥಾನ ಪಡೆದಿದ್ದಾರೆ.

ಎಸ್ಸೆಸ್ಸೆಲ್ಸಿ ಪರೀಕ್ಷೆಯಲ್ಲಿ ಬೆಂ.ಗ್ರಾ ಜಿಲ್ಲೆಗೆ ಉತ್ತಮ ಫಲತಾಂಶ ದೊರೆತಿದ್ದು, ಉತ್ತೀರ್ಣರಾದ ಎಲ್ಲಾ ಮಕ್ಕಳಿಗೆ, ಶಿಕ್ಷಕ ವೃಂದಕ್ಕೆ ಹಾಗೂ ಶಾಲಾ ಶಿಕ್ಷಣ ಇಲಾಖೆ ಅಧಿಕಾರಿಗಳಿಗೂ ಅಭಿನಂದನೆ. ಎಸ್ಸೆಸ್ಸೆಲ್ಸಿ ಪರೀಕ್ಷೆಗೆ ಸಾಕಷ್ಟು ಸಿದ್ಧತೆಗಳನ್ನು ನಡೆಸಿ ಯಾವುದೇ ಅಡೆತಡೆ ಇಲ್ಲದಂತೆ ಪರೀಕ್ಷೆ ಯಶಸ್ವಿಯಾಗಿ ನಡೆಸಲಾಯಿತು. ಜಿಲ್ಲೆಗೆ ಉತ್ತಮ ಫಲಿತಾಂಶ ಬಂದಿರುವುದು ಸಂತಸ ತಂದಿದೆ.

● **ಎ.ಬಿ.ಬಸವರಾಜು,**
ಬೆಂಗಳೂರು ಗ್ರಾಮಾಂತರ ಜಿಲ್ಲಾಧಿಕಾರಿ

ಈ ಬಾರಿಯ ಎಸ್ಸೆಸ್ಸೆಲ್ಸಿ ಪರೀಕ್ಷೆಯಲ್ಲಿ ಉತ್ತಮ ಫಲಿತಾಂಶ ಬಂದಿದ್ದು, ಉತ್ತಮ ಫಲಿತಾಂಶಕ್ಕಾಗಿ ವಿದ್ಯಾರ್ಥಿಗಳಿಗೆ ಸಾಕಷ್ಟು ತರಬೇತಿ ಕಾರ್ಯಕ್ರಮಗಳು, ಪಠ್ಯಕ್ರಮ, ವಿಶೇಷ ತರಗತಿಗಳು ಏರ್ಪಡಿಸಲಾಗಿತ್ತು. ಇದರಿಂದ ಉತ್ತಮ ಫಲಿತಾಂಶ ಬರಲು ಸಾಧ್ಯವಾಗಿದೆ. ಪಾಸಾದ ಎಲ್ಲಾ ವಿದ್ಯಾರ್ಥಿಗಳಿಗೂ ಅಭಿನಂದನೆ ಸಲ್ಲಿಸುತ್ತೇನೆ.

● **ಡಾ.ಕೆ.ಎನ್.ಅನುರಾಧ,**
ಸಿಇಒ, ಜಿಪಂ

ಎಸ್‌ಎಲ್‌ಎನ್ ಪ್ರೌಢಶಾಲೆಗೆ ಶೇ.86 ಫಲಿತಾಂಶ

ಯಾಮಿನಿ.ಬಿ 616 (98.56%)

ಶಿಲ್ಪಶ್ರೀ 599 (95.84%)

ರಚನಾ 544 (87.04%)

ತೇಜಸ್ ಗೌಡ 542 (86.72%)

ತಬಸ್ಸುಮ್ 539 (86.24%)

ಲಿಖಿತ 528 (84.48%)

ದಾಬಸ್‌ಪೇಟೆ: ತ್ಯಾಮಗೊಂಡ್ಲು ಹೋಬಳಿಯ ಅರೆಬೊಮ್ಮನಹಳ್ಳಿಯ ಶ್ರೀ ಲಕ್ಷ್ಮೀನರಸಿಂಹಸ್ವಾಮಿ ಪ್ರೌಢಶಾಲೆ (ಎಸ್‌ಎಲ್‌ಎನ್) ವಿದ್ಯಾರ್ಥಿನಿ, ಗ್ರಾಪಂ ನೀರು ನಿರ್ವಾಹಕರ ಮಗಳು ಬಿ. ಯಾಮಿನಿ ಎಸ್ಸೆಸ್ಸೆಲ್ಸಿ ಪರೀಕ್ಷೆಯಲ್ಲಿ 616 (98.56) ಅಂಕ ಪಡೆದಿದ್ದಾಳೆ. ಕನ್ನಡದಲ್ಲಿ 125 ಅಂಕ, ಸಮಾಜ ವಿಜ್ಞಾನ ಹಾಗೂ ವಿಜ್ಞಾನದಲ್ಲಿ 100 ಅಂಕ ಪಡೆದಿದ್ದಾರೆ. ಶಿಲ್ಪಶ್ರೀ 599 (95.84) ಅಂಕ, ರಚನಾ 544 (87.04) ಅಂಕ, ತೇಜಸ್ ಗೌಡ ಎಚ್.ಯು, 542 (86.72) ಅಂಕ, ತಬಸ್ಸುಮ್ 539 (86.24) ಅಂಕ, ಲಿಖಿತ 528 (84.48) ಅಂಕಗಳನ್ನು ಪಡೆದು ಉತ್ತೀರ್ಣರಾಗಿದ್ದಾರೆ. ಉತ್ತೀರ್ಣರಾದ ವಿದ್ಯಾರ್ಥಿಗಳನ್ನು ಶಾಲಾ ಮುಖ್ಯಶಿಕ್ಷಕ ಟಿ.ಕೆ.ರವಿಕುಮಾರ್ ಸೇರಿದಂತೆ ಶಿಕ್ಷಕರು, ಶಿಕ್ಷಕೇತರ ವೃಂದ ಅಭಿನಂದಿಸಿ ಶುಭಕೋರಿದ್ದಾರೆ.

ವಿವೇಕಾನಂದ ಪ್ರೌಢಶಾಲೆಗೆ ಶೇಕಡಾ 86%

ಸೂಲಿಬೆಲೆ: ಇಲ್ಲಿನ ವಿವೇಕಾನಂದ ಪ್ರೌಢ ಶಾಲೆಗೆ ಶೇ.86 ಫಲಿತಾಂಶ ಬಂದಿದೆ ಎಂದು ಮುಖ್ಯ ಶಿಕ್ಷಕ ಡಿ.ನಾರಾಯಣಸ್ವಾಮಿ ತಿಳಿಸಿದ್ದಾರೆ. 55 ವಿದ್ಯಾರ್ಥಿಗಳು ಪರೀಕ್ಷೆ ಎದುರಿಸಿದ್ದು 47 ವಿದ್ಯಾರ್ಥಿಗಳು ಉತ್ತೀರ್ಣರಾಗಿದ್ದು, ಉನ್ನತ ಶ್ರೇಣಿ ಒಬ್ಬ ವಿದ್ಯಾರ್ಥಿ, ಪ್ರಥಮ ದರ್ಜೆಯಲ್ಲಿ 31 ವಿದ್ಯಾರ್ಥಿಗಳು, ದ್ವಿತೀಯ ಶ್ರೇಣಿಯಲ್ಲಿ 15 ವಿದ್ಯಾರ್ಥಿಗಳು ಉತ್ತೀರ್ಣರಾಗಿದ್ದಾರೆ.

ಸುದ್ದಿ ಸಿಂಚನ

ಶಿವಗಂಗಾ ಪ್ರೌಢಶಾಲೆಗೆ ಶೇಕಡಾ 68 ಫಲಿತಾಂಶ

ತನುಶ್ರೀ 525(84%)

ಅಕ್ಷತ 523 (83%)

ಚರಿತ 500 (80%)

ದಾಬಸ್‌ಪೇಟೆ: ಸೋಂಪುರ ಹೋಬಳಿಯ ಶಿವಗಂಗೆಯ ಶ್ರೀ ಶಿವಗಂಗಾ ಪ್ರೌಢಶಾಲೆ ಎಸ್ಸೆಸ್ಸೆಲ್ಸಿ ಪರೀಕ್ಷೆಯಲ್ಲಿ ಶೇ.68ರಷ್ಟು ಫಲಿತಾಂಶ ಪಡೆದಿದೆ. ವಿದ್ಯಾರ್ಥಿಗಳಾದ ತನುಶ್ರೀ 525 (84%), ಅಕ್ಷತ 523 (83%), ಚರಿತ 500 (80%) ಅಂಕ ಪಡೆದಿದ್ದಾರೆ. ತೇರ್ಗಡೆ ಯಾದ ವಿದ್ಯಾರ್ಥಿಗಳಿಗೆ ಆಡಳಿತ ಮಂಡಳಿ, ಬೋಧಕ/ಬೋಧಕೇತರ ವರ್ಗ ಶುಭ ಕೋರಿದ್ದಾರೆ.

ವಿದ್ಯುತ್ ಶಾಕ್: ಕಾರ್ಮಿಕನಿಗೆ ಗಾಯ

ದೊಡ್ಡಬಳ್ಳಾಪುರ: ನಗರದ ಮಹಿಳಾ ಪೊಲೀಸ್ ಠಾಣೆ ಬಳಿ ಶೌಚಾಲಯ ನಿರ್ಮಾಣದ ವೇಳೆ ವಿದ್ಯುತ್ ಶಾಕ್ ಹೊಡೆದ ಪರಿಣಾಮ ಕಾರ್ಮಿಕ ಗಂಭೀರವಾಗಿ ಗಾಯಗೊಂಡಿದ್ದಾನೆ. ಉಗನವಾಡಿ ಗ್ರಾಮದ ರಾಕೇಶ್ ಗಾಯಾಳು. ಇಲ್ಲಿನ ಮಹಿಳಾ ಪೊಲೀಸ್ ಠಾಣೆ ಬಳಿ ಎರಡು ಶೌಚಾಲಯ ನಿರ್ಮಿಸುತ್ತಿದ್ದು, ಮೋಲ್ಡ್ ಕಂಬಿ ಕಟ್ಟುವ ವೇಳೆ 8 ಅಡಿ ಉದ್ದದ ಕಬ್ಬಿಣದ ರಾಡ್ ನಿರ್ಮಾಣ ಹಂತದಲ್ಲಿರುವ ಶೌಚಾಲಯ ಕಟ್ಟಡ ಮೇಲೆ ಹಾದು ಹೋಗಿರುವ 11 ಕೆವಿ ವಿದ್ಯುತ್ ಲೈನ್‌ಗೆ ಸ್ಪರ್ಶಿಸಿದ ಪರಿಣಾಮ ರಾಕೇಶ್‌ಗೆ ವಿದ್ಯುತ್ ಶಾಕ್ ಹೊಡೆದಿದೆ. ಕೂಡಲೇ ಆತನನ್ನು ನಗರದ ಸರ್ಕಾರಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಕೊಡಿಸಿ, ಹೆಚ್ಚಿನ ಚಿಕಿತ್ಸೆಗೆ ಸೆಂಟ್ ಜಾನ್ಸ್ ಆಸ್ಪತ್ರೆಗೆ ರವಾನಿಸಲಾಗಿದೆ.

ಭಾವನಾಳ ಶ್ರಮಕ್ಕೆ ತಕ್ಕ ಪ್ರತಿಫಲ: ತಾಯಿ ಮಾಲಾ ಮೆಚ್ಚುಗೆ

● **ಕನ್ನಡಪ್ರಭ ವಾರ್ತೆ** ವಿಜಯಪುರ

ಪಟ್ಟಣದ ಪವರ್‌ಲೂಮ್‌ನಲ್ಲಿ ಕೂಲಿ ಕೆಲಸ ಮಾಡುವ ಚಂದ್ರು-ಮಾಲ ದಂಪತಿ ಮಗಳು ಭಾವನಾ ಎಸ್ಸೆಸ್ಸೆಲ್ಸಿ ಪರೀಕ್ಷಾ ಫಲಿತಾಂಶದಲ್ಲಿ ರಾಜ್ಯದಲ್ಲಿ ಪ್ರಥಮ ಸ್ಥಾನ ಪಡೆದಿದ್ದಾಳೆ.

ಭಾವನಾ ಬಡತನದ ನಡುವೆಯೂ ಯಾವುದೇ ಟ್ಯೂಷನ್ ಇಲ್ಲದೆ ತಾನೇ ಮನೆಯಲ್ಲಿ ಓದಿಕೊಂಡು ಎಸ್ಸೆಸ್ಸೆಲ್ಸಿ ಪರೀಕ್ಷೆಯಲ್ಲಿ ರಾಜ್ಯದ ಟಾಪರ್‌ಆಗಿ 625ಕ್ಕೆ 625 ಅಂಕಗಳನ್ನು ಪಡೆದು ಊರಿಗೆ ಕೀರ್ತಿ ತಂದಿರುವಳು.

ಭಾವನ ತಂದೆ ಚಂದ್ರು ವಿಕಲಚೇತನರು. ಮಗ್ಗದ ಕೆಲಸ ಮಾಡುತ್ತ ಕಷ್ಟಪಟ್ಟು ಮಗಳನ್ನು ಓದಿಸಿದರು. ತಾವು ಇದುವರೆಗೂ ಮಗಳಿಗೆ ಚೆನ್ನಾಗಿ ಓದು ಎಂದೂ ಒತ್ತಡ ಹೇರುತ್ತಿರಲಿಲ್ಲ. ರಾತ್ರಿ ಹೆಚ್ಚು ಸಮಯದವರೆಗೂ ಓದಿದರೆ ಆರೋಗ್ಯ ಹಾಳಾಗುತ್ತದೆ. ನಿದ್ದಯೂ ಮಾಡಬೇಕು. ಓದುವ ಸಮಯದಲ್ಲಿ ಮಾತ್ರ ಓದು ಎಂದು ಹೇಳುತ್ತಿದ್ದೆ. ಇದೀಗ ಮಗಳ ಸಾಧನೆ ನಮಗೆ ಅಪಾರ ಸಂತೋಷ ನೀಡಿದೆ ಎಂದು ತಿಳಿಸಿದರು.

ವಿದ್ಯಾರ್ಥಿನಿಯ ತಾಯಿ ಗೃಹಿಣಿ, ತಾವು ಮಗಳಿಗೆ ಸಮಯಕ್ಕೆ ಸರಿಯಾಗಿ ಊಟ, ತಿಂಡಿ ನೀಡಿದ್ದೇವೆಯೇ ಹೊರತು ಹೆಚ್ಚುವರಿ ನಾವೇನು ಮಾಡಲು ಸಾಧ್ಯವಾಗಿಲ್ಲ, ಅವಳ ಫಲಿತಾಂಶಕ್ಕೆ, ಎಲ್ಲಾ ಭಾವನಾಳ ಶ್ರಮವೇ ಆಗಿದೆ. ನಮ್ಮ ಮಗಳು ನಮ್ಮ ಹೆಮ್ಮೆ ಎಂದು ತಿಳಿಸಿದರು.

ಒಕ್ಕಲಿಗರ ನೀಲಗಿರೇಶ್ವರ ವಿದ್ಯಾ ಸಂಸ್ಥೆ ಅಧ್ಯಕ್ಷ ವೀರಣ್ಣ ಮಾತನಾಡಿ, ನಮ್ಮ ಶಾಲೆಗೆ ಹಾಗೂ ಪಟ್ಟಣಕ್ಕೆ ಕೀರ್ತಿ ತಂದಿರುವ ಭಾವನಾ ಮುಂದಿನ ಉನ್ನತ ವಿದ್ಯಾಭ್ಯಾಸಕ್ಕೆ ಸಾಧ್ಯವಿರುವ ಎಲ್ಲಾ ಸಹಾಯ ಸಹಕಾರ ನೀಡುವುದಾಗಿ ತಿಳಿಸಿದರು.

ಒಕ್ಕಲಿಗರ ಸಂಘದ ನೀಲಗಿರೇಶ್ವರ ವಿದ್ಯಾ ಸಂಸ್ಥೆ ಕಾರ್ಯದರ್ಶಿ ನಾರಾಯಣಸ್ವಾಮಿ ಮಾತನಾಡಿ, ಸಂಸ್ಥೆಯಲ್ಲಿ ಜಸ್ಟ್ ಪಾಸ್ ಆಗಿರುವ ಮಕ್ಕಳನ್ನು ಸಹ ಇಲ್ಲಿ ಸೇರಿಸಿಕೊಂಡು ಅತ್ಯುತ್ತಮ ಶಿಕ್ಷಣ ನೀಡುವುದರೊಂದಿಗೆ ಉತ್ತಮ ಫಲಿತಾಂಶ ನೀಡುತ್ತಿರುವ ಮುಖ್ಯ ಶಿಕ್ಷಕ ಸೋಮಶೇಖರ್ ಹಾಗೂ ಸಿಬ್ಬಂದಿ ವರ್ಗದ ಶ್ರಮವೂ ಕಾರಣ. ಶಾಲೆಗೆ ಶೇ.100ರಷ್ಟು ಫಲಿತಾಂಶ ತಂದು ಕೊಟ್ಟಿರುವರೆಂದು ತಿಳಿಸಿದರು. ಮುಖ್ಯ ಶಿಕ್ಷಕ ಸೋಮ ಶೇಖರ್, ಆಡಳಿತ ಮಂಡಳಿ ಕೇಶವಪ್ಪ, ನಾಗರಾಜ್ ಹಾಗೂ ಸಿಬ್ಬಂದಿ ಉಪಸ್ಥಿತರಿದ್ದರು.

ವಿಹಾರಿಕಾಗೆ ಶೇ.91 ಫಲಿತಾಂಶ

ನೆಲಮಂಗಲ: ನಗರದ ವಾಜರಹಳ್ಳಿ ಸೇಂಟ್ ಆನ್ಸ್ ಹೈಸ್ಕೂಲ್ ವಿದ್ಯಾರ್ಥಿನಿ ಎನ್.ಆರ್. ವಿಹಾರಿಕಾ ಎಸ್ಸೆಸ್ಸೆಲ್ಸಿ ಪರೀಕ್ಷೆಯಲ್ಲಿ 566 ಅಂಕಗಳೊಂದಿಗೆ ಶೇ.91 ಫಲಿತಾಂಶ ಗಳಿಸಿದ್ದಾರೆ. ವಿಹಾರಿಕಾಗೆ ಶಾಲಾ ಮುಖ್ಯ ಶಿಕ್ಷಕರು, ಶಿಕ್ಷಕ ವೃಂದ, ಆಡಳಿತ ಮಂಡಳಿ ಹಾಗೂ ಪೋಷಕರು ಶುಭ ಹಾರೈಸಿದ್ದಾರೆ.

ಮೊರಾರ್ಜಿ ವಸತಿ ಶಾಲೆಗೆ ಶೇ.100

ಸೂಲಿಬೆಲೆ: ಇಲ್ಲಿನ ಮೊರಾರ್ಜಿ ವಸತಿ ಶಾಲೆಯಲ್ಲಿ ಶೇ.100 ಫಲಿತಾಂಶ ಬಂದಿದೆ ಎಂದು ಪ್ರಾಂಶುಪಾಲ ಬಸವರಾಜ್ ತಿಳಿಸಿದ್ದಾರೆ. 50 ವಿದ್ಯಾರ್ಥಿಗಳು ಪರೀಕ್ಷೆ ಎದುರಿಸಿದ್ದು 24 ವಿದ್ಯಾರ್ಥಿಗಳು ಉನ್ನತ ಶ್ರೇಣಿ ಯಲ್ಲಿ 23 ವಿದ್ಯಾರ್ಥಿಗಳು ಪ್ರಥಮ ಶ್ರೇಣಿ, 3 ವಿದ್ಯಾರ್ಥಿಗಳು ದ್ವಿತೀಯ ಶ್ರೇಣಿ ಯಲ್ಲಿ ಉತ್ತೀರ್ಣರಾಗಿದ್ದಾರೆ. ಗುಳ್ಳಹಳ್ಳಿಯ ಜಿಎಂ. ಮೋಹನ್ 623 ಅಂಕ ಪಡೆದು ಶೇ. 99.68 ಅಂಕ ಪಡೆದು ಶಾಲೆಗೆ ಪ್ರಥಮ ಸ್ಥಾನ ಪಡೆದು ಕೀರ್ತಿ ತಂದಿದ್ದಾನೆ.

ದಲಿತ ಯುವ ಮುಖಂಡ ಗೋವಿಂದರಾಜು ಮೇಲೆ ಹಲ್ಲೆ

ರಾಮನಗರ: ದಲಿತ ಯುವ ಮುಖಂಡ ಕೊತ್ತೀಪುರ ಗೋವಿಂದರಾಜು ಮೇಲೆ ಗುಂಪೊಂದು ಹಲ್ಲೆ ನಡೆಸಿದ್ದು, ಇದಕ್ಕೆ ಶಾಸಕ ಇಕ್ಬಾಲ್ ಹುಸೇನ್ ಹಾಗೂ ಅವರ ಬೆಂಬಲಿಗರೆ ಕಾರಣ ಎಂದು ಆರೋಪಿಸಿ ಗೋವಿಂದರಾಜು ನಗರದ ಐಜೂರು ಪೊಲೀಸ್ ಠಾಣೆಗೆ ದೂರು ನೀಡಿದ್ದಾರೆ.

ಪಟ್ಟಣದ ಬಿ.ಎಂ.ರಸ್ತೆಯಲ್ಲಿರುವ ಬ್ಯಾಂಕ್ ಆಫ್ ಇಂಡಿಯಾ ಶಾಖೆಯಿಂದ ಹೊರ ಬಂದು ರಾಮಕೃಷ್ಣ ಆಸ್ಪತ್ರೆ ಮುಂಭಾಗ ನಿಲ್ಲಿಸಿದ್ದ ಬೈಕ್ ಅನ್ನು ಹತ್ತಲು ಮುಂದಾದಾಗ ಮಾರಕಾಸ್ತ್ರಗಳೊಂದಿಗೆ ಬಂದ 6 ಮಂದಿ ನನ್ನನ್ನು ಸುತ್ತುವರಿದಿದ್ದಾರೆ.

ಶಾಸಕರ ವಿರುದ್ಧ ಮಾತನಾಡುತ್ತೀಯಾ, ಶಾಸಕ ಇಕ್ಬಾಲ್ ಹುಸೇನ್ ವಿರುದ್ಧ ಪತ್ರಿಕಾ ಹೇಳಿಕೆ ನೀಡುತ್ತೀಯಾ ಎಂದು ಧಮಕಿ ಹಾಕಿ ಹಲ್ಲೆ ಮಾಡಿದ್ದಲ್ಲದೆ, ಜಾತಿ ನಿಂದನೆ ಮಾಡಿದ್ದಾರೆ ಎಂದು ದೂರಿನಲ್ಲಿ ಆರೋಪಿಸಿದ್ದಾರೆ.

ಇತ್ತೀಚೆಗೆ ನಡೆದಿದ್ದ ಡಾ.ಬಿ.ಆರ್. ಅಂಬೇಡ್ಕರ್ ಜಯಂತಿ ಕಾರ್ಯಕ್ರಮದಲ್ಲಿ ಶಾಸಕರು ದಲಿತ ಹೋರಾಟಗಾರರ ಬಗ್ಗೆ ಅವಹೇಳನಾಕಾರಿಯಾಗಿ ಮಾತನಾಡಿದ್ದು, ಮಹಿಳಾ ದಿನಾಚರಣೆಯಲ್ಲಿ ನಡೆದಿದ್ದ ಅವ್ಯವಸ್ಥೆ ಬಗ್ಗೆ ಪತ್ರಿಕಾಗೋಷ್ಠಿ ನಡೆಸಿದ್ದೆ. ರಾಮನಗರ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ನಡೆದಿರುವ ಸರ್ಕಾರಿ ಕಾಮಗಾರಿಗಳಲ್ಲಿನ ಅಕ್ರಮದ ಬಗ್ಗೆ ಇಡಿ ಹಾಗೂ ಲೋಕಾಯುಕ್ತಕ್ಕೆ ದೂರು ನೀಡಲು ಸಿದ್ದವಾಗಿದೆ. ಈ ಹಿನ್ನೆಲೆಯಲ್ಲಿ ನನ್ನ ಮೇಲೆ ಹಲ್ಲೆ ಮಾಡಿಸಿದ್ದಾರೆ ಎಂದು ರಾಮನಗರದ ಖಾಸಗಿ ಆಸ್ಪತ್ರೆಯಲ್ಲಿ ದಲಿತ ಯುವ ಮುಖಂಡ ಕೊತ್ತೀಪುರ ಗೋವಿಂದರಾಜು ಚಿಕಿತ್ಸೆಗೆ ದಾಖಲಾಗಿರುವುದು. ಆರೋಪಿಸಿದ್ದಾರೆ.

ನನ್ನ ಮೇಲೆ 6 ಮಂದಿ ಹಲ್ಲೆ ಮಾಡಿ ರಾಡ್‌ನಿಂದ ಬೆನ್ನಿಗೆ ಹೊಡೆದು ಡ್ರಾಗನ್‌ನಿಂದ ತಿವಿದಿದ್ದು ನನಗೆ ತೀವ್ರ ಗಾಯಗಳಾಗಿ ರಾಮಕೃಷ್ಣ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದೇನೆ. ಶಾಸಕರ ವಿರುದ್ಧ ಮಾತನಾಡಿದರೆ ಜೀವಂತವಾಗಿ ಬಿಡುವುದಿಲ್ಲ ಎಂದು ಜೀವ ಬೆದರಿಕೆ ಹಾಕಿದ್ದಾರೆ. ನನ್ನ ಮೇಲೆ ಹಲ್ಲೆ ಮಾಡಿರುವ ಗೂಂಡಾಗಳಿಗೆ ಶಾಸಕ ಇಕ್ಬಾಲ್‌ಹುಸೇನ್, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಎ.ಬಿ.ಚೇತನ್ ಕುಮಾರ್, ಕಾಂಗ್ರೆಸ್ ಮುಖಂಡರಾದ ಅನಿಲ್ ಜೋಗಿಂಧರ್ ಮತ್ತು ಮದರ್ ಸಾಬರ ದೊಡ್ಡಿ ಗ್ರಾಮದ ರವಿಕುಮಾರ್‌ಕುಮ್ಮಕ್ಕು ನೀಡಿ ಕಳುಹಿಸಿದ್ದಾರೆ ಎಂದು ದೂರಿನಲ್ಲಿ ಗೋವಿಂದರಾಜು ಆರೋಪ ಮಾಡಿದ್ದಾರೆ.

ಸುರಭಿ ಸೌಹಾರ್ದ ಕ್ರೆಡಿಟ್ ಕೋ-ಆಪರೇಟಿವ್ ಲಿಮಿಟೆಡ್.,

ನಂ. 02, ಸುರಭಿ ಸಹಕಾರಿ ಸದನ, 2ನೇ ಮಹಡಿ, 13ನೇ ಕ್ರಾಸ್, ಅತ್ತಿಮಬ್ಬೆ ರಸ್ತೆ, ಸಿ.ಟಿ. ಬೆಡ್ ಎಕ್ಸ್‌ಟೆನ್ಷನ್, ಬನಶಂಕರಿ 2ನೇ ಹಂತ, ಬೆಂಗಳೂರು –